**<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು</u>**

ದಿನಾಂಕಃ 06 ನೇ ಜುಲೈ ತಿಂಗಳು 2026ರಂದು

**<u>ಸಿಸಿ ನಂ.191/2026</u>**

**ಫಿರ್ಯಾದುದಾರರುಃ** ಸರಕಾರ (ಹುಣಸೂರು ಪಟ್ಟಣ ಪೊಲೀಸರಿಂದ)

– ವಿರುದ್ಧ –

**ಆರೋಪಿಃ** ಸುಬಾನ್ ಪಾಷ, ಬಿನ್ ಶೇಕ್ ಮೊಹಿದ್ದೀನ್, 39 ವರ್ಷ, ವ್ಯಾಪಾರಸ್ಥರು, ವಾಸಃ ಗುರುಪುರ ಗ್ರಾಮ, ಹುಣಸೂರು ತಾಲ್ಲೂಕು.

**<u>ದೋಷಾರೋಪಣೆ</u>**

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 21.01.2026ರಂದು ಬೆಳಿಗ್ಗೆ 11.30 ಗಂಟೆ ಸಮಯದಲ್ಲಿ ಹುಣಸೂರು ಪಟ್ಟಣ ಪೊಲೀಸ್ ಠಾಣಾ ಸರಹದ್ದು ಹುಣಸೂರು ಟೌನಿನ ಬಿ.ಎಂ.ಬೈಪಾಸ್ ರಸ್ತೆಯ ನವೀನ್ ಹೀರೋ ಷೋರೂಮ್ ಮತ್ತು ವಿಶಾಲ್ ಕರ್ನಾಟಕ ಆಗ್ರೋ ಸೆಂಟರ್ ಗಳ ನಡುವೆ ಪೂರ್ವ ಪಶ್ಚಿಮವಾಗಿ ಹಾದು ಹೋಗಿರುವ ರಸ್ತೆಯಲ್ಲಿ ಚಾಸಾ.2ಅಕ್ರಮ ಪಾಷಾ ರವರು ಕಲ್ಕುಣಿಕೆ ಕಡೆಯಿಂದ ಶಬ್ಬೀರ್ ನಗರದ ಕಡೆಗೆ ವಿಶಾಲ್ ಕರ್ನಾಟಕ ಆಗ್ರೋ ಸೆಂಟರ್ ನ ಮುಂದಿನ ಪುಟ್ ಬಾತ್ ನಲ್ಲಿ ನಡೆದುಕೊಂಡು ಬರುತ್ತಿರುವಾಗ ಆರೋಪಿಯಾದ ನೀವು ನಿಮ್ಮ ಕೆಎ–45/ಇಇ–5107ರ ಸುಜುಕಿ ಆಕ್ಸಿಸ್ ಸ್ಕೂಟಿಯನ್ನು ಕಲ್ಕುಣಿಕೆ ಕಡೆಯಿಂದ ಶಬ್ಬೀರ್ ನಗರ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 281 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ರಸ್ತೆಯ ಎಡಭಾಗದ ಪುಟ್ ಬಾತ್ ನಲ್ಲಿ ನಡೆದುಕೊಂಡು ಹೋಗುತ್ತಿದ್ದ ಚಾಸಾ.2ರವರಿಗೆ ಹಿಂದಿನಿಂದ ಡಿಕ್ಕಿ ಮಾಡಿದ

ಪರಿಣಾಮ ಚಾಸಾ.2ರವರ ಬಲಕೈಗೆ ತೀವ್ರ ಸ್ವರೂಪದ ಗಾಯಪಡಿಸಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.125(ಬಿ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂ., ಹುಣಸೂರು.**

ANITHA

Digitally signed by ANITHA
Date: 2026.07.06 17:56:06 +0530

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.191/2026**

| | | |
|---|---|---|
| ಆಪಾದಿತನ ಹೆಸರು | : | ಸುಬಾನ್ ಪಾಷ, |
| ತಂದೆಯ ಹೆಸರು | : | ಶೇಕ್ ಮೊಹಿದ್ದೀನ್, |
| ವಯಸ್ಸು | : | 39 ವರ್ಷ, |
| ಉದ್ಯೋಗ | : | ವ್ಯಾಪಾರಸ್ಥರು |
| ವಾಸ | : | ಗುರುಪುರ ಗ್ರಾಮ, ಹುಣಸೂರು ತಾಲ್ಲೂಕು. |

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ 234ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | ತಪ್ಪು ಒಪ್ಪಿಕೊಳ್ಳುತ್ತೇನೆ |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 06.07.2026 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

ANITHA Digitally signed by ANITHA Date: 2026.07.06 17:56:12 +0530

Sd/-
(ಅನಿತ)
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ಹುಣಸೂರು.**